# ಬೆಂಗಳೂರು ಕೇಂದ್ರ ನಗರ ಪಾಲಿಕೆ

ಜಂಟಿ ಆಯುಕ್ತರು (ವಲಯ-1) ರವರ ಕಛೇರಿ, ರೆಸಿಡೆನ್ಸಿ ರಸ್ತೆ,
ಮೇಯೋಹಾಲ್ ಕಟ್ಟಡ, ಬೆಂಗಳೂರು-560001

**ಸಂಖ್ಯೆ: ಜಂ.ಆ(ವ-1)/ಜನಗಣತಿ/ಪಿಆರ್/03/2026-27** **ದಿನಾಂಕ: 20-04-2026**

## ಭಾರತದ ಜನಗಣತಿ-2027 ಕಾರ್ಯ ನಿರ್ವಹಣೆಗೆ ಗಣತಿದಾರರ ನೇಮಕಾತಿಗೆ ನೇರ ಸಂದರ್ಶನ

ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಭಾರತದ ಜನಗಣತಿ-2027ರ ಮೊದಲನೇ ಹಂತದ ಕಾರ್ಯವಾದ ಮನೆ ಪಟ್ಟಿ ಮತ್ತು ಮನೆ ಗಣತಿ ಕಾರ್ಯ ಹಾಗೂ ಫೆಬ್ರವರಿ 2027ರಲ್ಲಿನ 2ನೇ ಹಂತದ ಜನಗಣತಿ ಕಾರ್ಯದ ಪರಿಣಾಮಕಾರಿಯಾಗಿ ಹಾಗೂ ಕಾಲಮಿತಿಯಲ್ಲಿ ಪೂರ್ಣಗೊಳಿಸುವ ಉದ್ದೇಶ ಹೊಂದಿದ್ದು, ರಾಷ್ಟ್ರೀಯ ಮಹತ್ವದ ಈ ಕಾರ್ಯ ನಿರ್ವಹಿಸುವ ಮೂಲಕ ರಾಷ್ಟ್ರದ ಅಭಿವೃದ್ಧಿ ಕಾರ್ಯಕ್ಕೆ ಕೈಜೋಡಿಸಲು, ಈ ಸಂಬಂಧ ಗಣತಿ ಕಾರ್ಯ ನಿರ್ವಹಿಸಲು ಆಸಕ್ತ, ವಿದ್ಯಾರ್ಥಿಗಳು, ಪುರುಷ ಹಾಗೂ ಮಹಿಳೆಯರು ನೇರ ಸಂದರ್ಶನಕ್ಕೆ ಹಾಜರಾಗಲು ತಿಳಿಸಿದೆ.

### ಗಣತಿದಾರರ ಸಂಖ್ಯೆ, ವಿದ್ಯಾರ್ಹತೆ, ಗೌರವ ಧನ, ಹಾಗೂ ಇನ್ನಿತರೆ ವಿವರ :

1. ವಿದ್ಯಾರ್ಹತೆ: ದ್ವಿತೀಯ ಪಿ.ಯು.ಸಿ. ಹಾಗೂ ಅದಕ್ಕಿಂತ ಹೆಚ್ಚಿನ ವಿದ್ಯಾರ್ಹತೆ ಹೊಂದಿರಬೇಕು
2. ಕನಿಷ್ಠ Android-12, 4GB RAM Specification ಮೊಬೈಲ್ ಹೊಂದಿರಬೇಕು
3. ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯ (1) ಸಿ.ವಿ.ರಾಮನ್ ನಗರ (2) ಶಾಂತಿನಗರ (3) ಶಿವಾಜಿನಗರ (4) ಚಾಮರಾಜಪೇಟೆ (5) ಚಿಕ್ಕಪೇಟೆ ಹಾಗೂ (6) ಗಾಂಧಿನಗರ ಕ್ಷೇತ್ರಗಳ ನಿವಾಸಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು.
4. ಮೊದಲ ಹಂತದ ಮನೆ ಪಟ್ಟಿ ಮತ್ತು ಮನೆಗಣತಿ ಕಾರ್ಯವು ದಿನಾಂಕ: 15-05-2026 ವರೆಗೆ ನಡೆಯಲಿದ್ದು, ಅಲ್ಲಿಯವರೆಗೆ ರಜಾ ದಿನವೂ ಸೇರಿದಂತೆ ನಿರಂತರವಾಗಿ ಕಾರ್ಯನಿರ್ವಹಿಸಲು ಬದ್ಧರಾಗಿರಬೇಕು.
5. ಭಾರತದ ಜನಗಣತಿ-2027ರ ಜನಗಣತಿ ಮಾರ್ಗಸೂಚಿಯನ್ವಯ ದಿನಾಂಕ: 15-05-2026 ವರೆಗಿನ ಮೊದಲ ಹಂತದ ಗಣತಿ ಕಾರ್ಯಕ್ಕೆ ರೂ.9,000/- (ರೂ. ಒಂಭತ್ತು ಸಾವಿರ ಮಾತ್ರ) ಗೌರವಧನ ನೀಡಲಾಗುವುದು (ಕನಿಷ್ಠ 150-200 ಮನೆಗಳಿಗೆ)
6. ಭಾರತದ ಜನಗಣತಿ-2027ರ 2ನೇ ಹಂತದ ಕಾರ್ಯವು ಫೆಬ್ರವರಿ-2027 ರ ಮಾಹೆಯಲ್ಲಿ ನಡೆಯಲಿದ್ದು, ಸದರಿ ಕಾರ್ಯಕ್ಕೆ ರೂ.16,000/- (ರೂ. ಹದಿನಾರು ಸಾವಿರ ಮಾತ್ರ) ಗೌರವಧನ ನೀಡಲಾಗುವುದು.(150-200 ಮನೆಗಳಿಗೆ ಅಥವಾ 750 ರಿಂದ 800 ಜನಸಂಖ್ಯೆಗೆ)
7. ಈ ಆಯ್ಕೆಯು ಭಾರತದ ಜನಗಣತಿ-2027ರ ಗಣತಿ ಕಾರ್ಯ ನಿರ್ವಹಣೆಗೆ ಮಾತ್ರ ಸೀಮಿತವಾಗಿರುತ್ತದೆ.
8. ಆಯ್ಕೆಯಾದವರಿಗೆ ಕಾರ್ಯ ನಿರ್ವಹಣೆ ಅನುಕೂಲವಾಗಲು ಜನಗಣತಿ ಮೊಬೈಲ್ ಅಪ್ಲಿಕೇಷನ್ ನಲ್ಲಿ ಮಾಹಿತಿ ಪಡೆಯುವ ಹಾಗೂ ಗಣತಿ ಕಾರ್ಯನಿರ್ವಹಣೆ ಬಗ್ಗೆ ಮಾಸ್ಟರ್ ಟ್ರೈನರ್ ಗಳಿಂದ ಅಗತ್ಯ ತರಬೇತಿ ನೀಡಲಾಗುವುದು
9. **ಆಯ್ಕೆ ಮಾಡಿಕೊಳ್ಳುವ ಗಣತಿದಾರರ ಸಂಖ್ಯೆ: 1,000 ಗಣತಿದಾರರು**
10. ನೇಮಕಾತಿ ಮಾಡಿಕೊಳ್ಳುವುದು ಕೇಂದ್ರ ನಗರ ಪಾಲಿಕೆ ಮಾನ್ಯ ಆಯುಕ್ತರ ವಿವೇಚನೆಗೆ ಒಳಪಟ್ಟಿರುತ್ತದೆ.

**ನೇರ ಸಂದರ್ಶನ ದಿನಾಂಕ, ಸಮಯ ಮತ್ತು ಸ್ಥಳ :**
**ದಿನಾಂಕ: 22-04-2026 ರಂದು (ಬುಧವಾರ) ಸಮಯ: ಬೆಳಗ್ಗೆ 9.00 ಗಂಟೆಗೆ**
**ಸ್ಥಳ: ಸರ್ ಪುಟ್ಟಣ್ಣಚೆಟ್ಟಿ ಪುರಭವನ (ಟೌನ್ ಹಾಲ್), ಬೆಂಗಳೂರು.**

ಮಾನ್ಯ ಆಯುಕ್ತರ ಆದೇಶದ ಮೇರೆಗೆ

ಸಹಿ/-

**ಜಂಟಿ ಆಯುಕ್ತರು (ವಲಯ-1) ಬೆಂಗಳೂರು ಕೇಂದ್ರ ನಗರ ಪಾಲಿಕೆ**

Published for the Proprietors, Metropolitan Media Company Limited, by Lokesh K V at No.74/2, Sanjana Plaza, 4th & 5th Floor, Elephant Rock
Bangalore 560 099 (Ph: 08042200500) Regd. Office: No. 74/2, Sanjana Plaza, 4th & 5th Floor, Elephant Rock Road, Jayanagar 3rd block, Bengal